# 800 ಮೀಟರ್ ರನ್ನಿಂಗ್ ಮಾಡಿ ಮತದಾನ ಜಾಗೃತಿ ಮೂಡಿಸಿದ ಜಿ.ಪಂ ಸಿಇಓ



ವಿಜಯಪುರ ಏ. : ಒಂದು ದೇಶದ ಶಕ್ತಿಶಾಲಿ ಸಂಪನ್ಮೂಲ ಎಂದರೆ ಅದು ಯವಶಕ್ತಿ. ದೇಶಕ್ಕೆ ಯುವಕರ ಕೊಡುಗೆ ಅತ್ಯಂತ ಮಹತ್ವದಾಗಿದೆ. ದೇಶದ ಭವಿಷ್ಯ ನಿರ್ಮಾಣ ಕಾರ್ಯಕ್ಕೆ ಎಲ್ಲಾ ಯುವಕರು ಲೋಕಸಭಾ ಚುನಾವಣೆಯಲ್ಲಿ ಪಾರದರ್ಶಕ ಹಾಗೂ ಮುಕ್ತವಾಗಿ ಮತದಾನ ಮಾಡುವ ಮೂಲಕ ಸದೃಡ ದೇಶ ನಿರ್ಮಾಣಕ್ಕೆ ಕಾರಣಿಭೂತರಾಗಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವಿಜಯಪುರ ಇವರ ಸಹಯೋಗದಲ್ಲಿ

ನಗರದ ಡಾ. ಬಿ. ಆರ್ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸೋಮುವಾರ ಕ್ರೀಡಾ ಇಲಾಖೆಯ ಯುವ ಕ್ರೀಡಾಪಟುಗಳೊಂದಿಗೆ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಟವನ್ನು ಗೆಲ್ಲಬೇಕಾದರೆ ಹೇಗೆ ಸತತ ಪರಿಶ್ರಮ ಪಡುತ್ತೇವೆಯೋ ಹಾಗೆ ಸ್ವಚ್ಛ ಹಾಗೂ ನ್ಯಾಯಸಮ್ಮತ ಆಡಳಿತ ನಿರ್ಮಾಣವಾಗಲು ಯೋಗ್ಯ ಅಭ್ಯರ್ಥಿಗಳ ಆಯ್ಕೆ ಮಾಡುವಲ್ಲಿ ಯುವಶಕ್ತಿ ಮುಂದಾಗಬೇಕು. ಅದಲ್ಲದೇ ತಮ್ಮ ಕುಟುಂಬ, ನೆರೆಹೊರೆಯವರಿಗೆ ಮತದಾನದ ಮಹತ್ವ ತಿಳಿಸಿ ಕಡ್ಡಾಯ ಮತದಾನ ಮಾಡುವಂತೆ ಪ್ರೋತ್ಸಾಹಿಸಬೇಕು ಎಂದರು. ಮತದಾನ ಮಾಡುವ ಮೂಲಕ ನಿಮ್ಮದೇ ಆದ ಕೊಡುಗೆಯನ್ನು ನೀಡಬೇಕು. ಮೊಟ್ಟಮೊದಲ ಬಾರಿಗೆ ಮತದಾನ ಮಾಡುತ್ತಿರುವ ನೀವು ಯಾವುದೇ ಭಯವಿಲ್ಲದೆ, ನಿರ್ಭೀತರಾಗಿ ಮತದಾನ ಮಾಡಿ. ನೀವಷ್ಟೇ ಅಲ್ಲದೆ ಮೊದಲ ಬಾರಿಗೆ ಮತದಾನ ಮಾಡುತ್ತಿರುವ ನಿಮ್ಮ ಸ್ನೇಹಿತರಿಗೂ ಕೂಡ ಚುನಾವಣೆ ದಿನದಂದು ಮತದಾನ ಮಾಡಲು ಪ್ರೇರೇಪಣೆ ನೀಡಬೇಕು ಹಾಗೂ ಎಲ್ಲ ಮತದಾರರಿಗೆ ನೀವು ಮಾದರಿಯಾಗಬೇಕು ಎಂದು ಕಿವಿಮಾತುಗಳನ್ನು ಹೇಳಿದರು.

ನಂತರ ಸಿಇಓ ರವರು ಎಲ್ಲ ಕ್ರೀಡಾಪಟುಗಳೊಂದಿಗೆ ಕ್ರೀಡಾಂಗಣದಲ್ಲಿ 800 ಮೀಟರ್ ರನ್ನಿಂಗ್ ಮಾಡುವ ಮೂಲಕ ಎಲ್ಲಾ ಕ್ರೀಡಾಪಟುಗಳಿಗೆ ಮಾದರಿಯಾದರು ಮತ್ತು ಕ್ರೀಡಾಪಟುಗಳ ಆತ್ಮಸ್ಥೈರ್ಯವನ್ನು ಹೆಚ್ಚಿಸಿದರು. ಈ ಸಂದರ್ಭದಲ್ಲಿ ಎಲ್ಲ ಕ್ರೀಡಾಪಟುಗಳು ಅತ್ಯಂತ ಉತ್ಸಾಹ ಮತ್ತು ಆಸಕ್ತಿಯಿಂದ ಸಿಇಓ ರವರೊಂದಿಗೆ ಬೆರೆತು ರನ್ನಿಂಗ್ ನಲ್ಲಿ ಭಾಗವಹಿಸಿದರು. ಇದೇ ರೀತಿ ಎಲ್ಲರೂ ಅತ್ಯಂತ ಉತ್ಸಾಹದಿಂದ ಹಾಗೂ ಸಂತಸದಿಂದ ಮತದಾನದ ದಿನದಂದು ತಪ್ಪದೆ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಕ್ರೀಡಾಪಟುಗಳನ್ನು ಹುರಿದುಂಬಿಸಿದರು. ಬಳಿಕ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಗಳಾದ ಸಿ. ಆರ್. ಮುಂಡರಗಿ ರವರು ಮಾತನಾಡಿ, ಪ್ರಪಂಚದಲ್ಲೇ ಅತ್ಯಂತ ಸದೃಢ ಪ್ರಜಾಪ್ರಭುತ್ವ ವ್ಯವಸ್ಥೆ ಹೊಂದಿದ ಭಾರತ. ಉತ್ತಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ ದೇಶ ಎಂದು ಪ್ರಪಂಚವೇ ನಮ್ಮತ್ತ ಕೈ ಬೀಸಿ ಹೇಳುತ್ತದೆ. ಅದಕ್ಕಾಗಿ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕಾಪಾಡುವುದು ಮತ್ತು ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆ 2024ರಂದು ಕಡ್ಡಾಯವಾಗಿ ಮತ್ತು ಖಚಿತವಾಗಿ ಮತದಾನ ಮಾಡುವ ಮೂಲಕ ನಮ್ಮ ಜವಾಬ್ದಾರಿಯನ್ನು ನಿರ್ವಹಿಸೋಣ ಎಂದರು.

ಈ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ರಾಜೇಶ್ ಪವಾರ್ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಸಾಕ್ಷಿ ಹಿರೇಮಠ ರವರು ಮತದಾನದ ಜಾಗೃತಿ ಕುರಿತ ಗೀತೆಗಳನ್ನು ಹಾಡುವ ಮೂಲಕ ಎಲ್ಲ ಕ್ರೀಡಾಪಟುಗಳಲ್ಲಿ ಮತದಾನದ ಕುರಿತು ಅರಿವು ಮೂಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿಯವರಾದ ಬಿ. ಎಸ್. ಮೂಗನೂರಮಠ, ವಿಜಯಪುರ ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ. ಹೊಂಗಯ್ಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಎಸ್. ಜಿ. ಲೋಣಿ, ಜಿಲ್ಲಾ ಎನ್.ಎಸ್.ಎಸ್ ಘಟಕದ ನೊಡೆಲ್ ಅಧಿಕಾರಿಗಳಾದ ಪ್ರಕಾಶ ರಾಠೋಡ, ಜಿಲ್ಲ ಸ್ವೀಪ್ ಸಮಿತಿಯ ರಾಯಭಾರಿ ಸಹನಾ ಕುಡಿಗನೂರ, ಜಿಲ್ಲೆಯ ಅಥ್ಲೆಟಿಕ್ ಕ್ರೀಡಾಕೂಟಗಳ ಕೋಚ್ ಗಳು, ಜಿಲ್ಲಾ ಪಂಚಾಯುತಿಯ ಅಧಿಕಾರಿ ಮತು ಸಿಬ್ಬಂದಿಯವರು, ಕ್ರೀಡಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ರಸ್ತೆ ಅಪಘಾತ ಪ್ರಾಣ ಕಳೆದುಕೊಂಡ ಖಳನಟ



ಛತ್ತೀಸ್‌ಗಢ ಚಿತ್ರರಂಗದ ಖ್ಯಾತ ಖಳನಟ ಸೂರಜ್ ಮೆಹರ್ ಏಪ್ರಿಲ್ 10 ರಂದು ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಸೂರಜ್ ನಿಧನದಿಂದಾಗಿ ಛತ್ತೀಸ್‌ಗಢ ಚಿತ್ರರಂಗದಲ್ಲಿ ಶೋಕದ ಅಲೆ ಆವರಿಸಿದೆ. ಬಿಲೈಗಢ್‌ನ ಸರ್ಸಿವಾ ಪ್ರದೇಶದಲ್ಲಿ ಅವರ ಸ್ಕಾರ್ಪಿಯೋ ಪಿಕಪ್ ವಾಹನ ಡಿಕ್ಕಿ ಹೊಡೆದಿದೆ. ಈ ಅಪಘಾತದಲ್ಲಿ ನಟ ಸೂರಜ್ ಮೆಹರ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಆಘಾತಕಾರಿ ವಿಷಯವೆಂದರೆ 40 ವರ್ಷದ ಸೂರಜ್ ಮೆಹರ್ ಸಾವನ್ನಪ್ಪಿದ ದಿನವೇ ಅವರ ನಿಶ್ಚಿತಾರ್ಥ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಒಡಿಶಾದ ಭಥಾಲಿಯಲ್ಲಿ ಎಂಗೇಜ್?ಮೆಂಟ್ ನಡೆಯಬೇಕಿತ್ತು. ಬಿಲೈಗಢ ಗ್ರಾಮದ ನಿವಾಸಿ ಸೂರಜ್ ಮೆಹರ್ ಅವರು ಬಿಲಾಸ್‌ಪುರದಲ್ಲಿ ಚಲನಚಿತ್ರದ ಚಿತ್ರೀಕರಣ ಮುಗಿಸಿ ಏಪ್ರಿಲ್ 9–10 ರಂದು ತಡರಾತ್ರಿ ಸ್ಕಾರ್ಪಿಯೋದಲ್ಲಿ ಮನೆಗೆ ಮರಳುತ್ತಿದ್ದರು. ಈ ವೇಳೆ ದಾರಿ ಮಧ್ಯೆ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಆಖ್ರಿ ಫೈಸ್ಲಾ ಚಿತ್ರದ ಚಿತ್ರೀಕರಣ ಮುಗಿಸಿ ಹಿಂತಿರುಗುತ್ತಿದ್ದರು. ಏಪ್ರಿಲ್ 10 ರ ಮುಂಜಾನೆಯಲ್ಲಿ ಭೀಕರ ಅಫಘಾತ ಸಂಭವಿಸಿದೆ. ಅಪಘಾತದ ನಂತರ ತೀವ್ರವಾಗಿ ಗಾಯಗೊಂಡಿದ್ದ ಖಳನಟ ಸೂರಜ್ ಮೆಹರ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯ್ತು. ಡಿಕ್ಕಿಯ ರಭಸಕ್ಕೆ ಸ್ಕಾರ್ಪಿಯೋ ಕಾರು ಸಂಪೂರ್ಣ ಜಖಂ ಆಗಿತ್ತು. ಮೆಹರ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯ ಬಗ್ಗೆ ಮಾಹಿತಿ ಪಡೆದ ತಕ್ಷಣ ಸರ್ಸಿವಾ ಪೊಲೀಸರು ಸ್ಥಳಕ್ಕೆ ಧಾವಿಸಿ ಸ್ಕಾರ್ಪಿಯೋದಲ್ಲಿ ಸಿಲುಕಿದ್ದ ಜನರನ್ನು ಹೊರತೆಗೆದು ಆಸ್ಪತ್ರೆಗೆ ದಾಖಲಿಸಿದ್ದಾರೆ.

ವೈದ್ಯರು ನಟ ಸೂರಜ್ ಮೆಹರ್ ಮೃತಪಟ್ಟಿರುವುದಾಗಿ ಘೋಷಿಸಿದ್ರು. ಅಪಘಾತದಲ್ಲಿ ಸ್ಕಾರ್ಪಿಯೋ ಸವಾರಿ ಮಾಡುತ್ತಿದ್ದ ಆತನ ಮತ್ತೋರ್ವ ಸ್ನೇಹಿತ ಆರ್ಯ ವರ್ಮಾ ಮತ್ತು ಚಾಲಕ ಭೂಪೇಶ್ ಪಟ್ಲೆ ಗಂಭೀರವಾಗಿ ಗಾಯಗೊಂಡಿದ್ದಾರೆ. ಬಿಲೈಗಢ ಆಸ್ಪತ್ರೆಗೆ ದಾಖಲಾದ ನಂತ್ರ ಅವರನ್ನು ಬಿಲಾಸ್ ಪುರಕ್ಕೆ ರವಾನಿಸಲಾಗಿದೆ. ಗಾಯಗೊಂಡ ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ.

ಇತ್ತೀಚಿಗಷ್ಟೇ ತಮಿಳಿನ ಖ್ಯಾತ ನಟ ಡೇನಿಯಲ್ ಬಾಲಾಜಿ ನಿಧನರಾಗಿದ್ರು. ಚೆನ್ನೈನ ಖಾಸಗಿ ಆಸ್ಪತ್ರೆಯಲ್ಲಿ ತಮಿಳು ನಟ ಡೇನಿಯಲ್ ಬಾಲಾಜಿ ಮಾರ್ಚ್ 29 ಹೃದಯಾಘಾತದಿಂದ ನಿಧನರಾಗಿದ್ರು. ಕಳೆ ಶುಕ್ರವಾರ ರಾತ್ರಿ ಅವರಿಗೆ ಎದೆ ನೋವು ಕಾಣಿಸಿಕೊಂಡಿತ್ತು. ಚಿಕಿತ್ಸೆ ಪಡೆಯುತ್ತಿರುವಾಗಲೇ ಅವರು ನಿಧನರಾಗಿದ್ದರು.

ಬಾಲಾಜಿಗೆ 48 ವರ್ಷ ವಯಸ್ಸಾಗಿತ್ತು. ಇದ್ದಕ್ಕಿದ್ದ ಹಾಗೆ ಬಾಲಾಜಿ ಅವರು ನಿಧನರಾಗಿರೋದು ಅವರ ಕುಟುಂಬಸ್ಥರು, ಆತ್ಮೀಯರು ಸೇರಿ ಇಡೀ ಚಿತ್ರರಂಗಕ್ಕೆ ಶಾಕ್ ನೀಡಿತು. ಅನೇಕ ಸಿನಿಮಾ ನಟ–ನಟಿಯರು ಬಾಲಾಜಿ ಸಾವಿಗೆ ಸಂತಾಪ ಸೂಚಿಸಿದ್ರು.

ಸಿನಿಮಾಗಳಲ್ಲಿ ಖಳನಾಯಕನ ಪಾತ್ರ ಮಾಡುತ್ತ ಜನಪ್ರಿಯತೆ ಪಡೆದಿದ್ದ ಬಾಲಾಜಿ ಅವರು ಹೆಚ್ಚಾಗಿ ತಮಿಳು ಸಿನಿಮಾಗಳಲ್ಲಿ ನಟಿಸಿದ್ದರು. ಬಾಲಾಜಿ ಅವರು ಕಮಲ್ ಹಾಸನ್‌ರ ತೆರೆ ಕಾಣದ 'ಮರುದುನಯಗಂ' ಸಿನಿಮಾದಲ್ಲಿ ಯುನಿಟ್ ಪ್ರೊಡಕ್ಷನ್ ಮ್ಯಾನೇಜರ್ ಆಗಿದ್ದರು. 'ಚಿತ್ತಿ' ಎನ್ನುವ ಧಾರಾವಾಹಿಯಲ್ಲಿಯೂ ಅವರು ನಟಿಸಿದ್ದರು. ಈ ಸಿನಿಮಾದಲ್ಲಿ ರಾಧಿಕಾ ಶರತ್‌ಕುಮಾರ್ ಅವರು ಮುಖ್ಯ ಪಾತ್ರ ನಿರ್ವಹಿಸಿದ್ದರು. ಧಾರಾವಾಹಿಯಲ್ಲಿ ಬಾಲಾಜಿ ಅವರು ಡೇನಿಯಲ್ ಎನ್ನುವ ಪಾತ್ರ ಮಾಡಿದ್ದರು. ಇದರಿಂದಲೇ ಅವರಿಗೆ ಡೇನಿಯಲ್ ಎಂಬ ಹೆಸರು ಬಂದಿತ್ತು. ಈ ಬಳಿಕ ನಟ ಫುಲ್ ಫೇಮಸ್ ಆಗಿದ್ದರು.

# ವಿಜಯಪುರ: ಕೇಂದ್ರ ಬಸ್ ನಿಲ್ದಾಣದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ



ವಿಜಯಪುರ ಏ : ಸುಭದ್ರ ದೇಶ ನಿರ್ಮಾಣಕ್ಕೆ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು. ಲೋಕಸಭೆ ಚುನಾವಣೆಯನ್ನು ಯಶಸ್ವಿಗೊಳಿಸಿ ಉತ್ತಮ ಆಡಳಿತ ಪಡೆಯಲು ನಾಗರೀಕರ ಸಹಕಾರ ಪ್ರಮುಖವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಅವರು ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ಇವರ ಸಹಯೋಗದಲ್ಲಿ ಮಂಗಳವಾರ ನಗರದ ಕೇಂದ್ರ ಬಸ್ ನಿಲ್ದಾಣ ಮತ್ತು ಸ್ಯಾಟಲೈಟ್ ಬಸ್ ನಿಲ್ದಾಣಗಳಲ್ಲಿ ಲೋಕಸಭಾ ಚುನಾವಣೆ 2024 ರ ಹಿನ್ನೆಲೆಯಲ್ಲಿ ಮತದಾನದ ಜಾಗೃತಿ ಕಾರ್ಯಕ್ರಮದಲ್ಲಿ ಪ್ರಯಾಣಿಕರೊಂದಿಗೆ ಮಾಹಿತಿ ವಿನಿಮಯ ನೀಡಿ ಮಾತನಾಡಿದರು. ಚುನಾವಣಾ ಆಯೋಗ ಗುರುತು ಮಾಡಿರುವ ದಾಖಲೆಗಳೊಂದಿಗೆ ಮತಗಟ್ಟೆಗೆ ತೆರಳಿ ಮತದಾನ ಮಾಡಬೇಕು.

ಹಿರಿಯರು, ವಿಶಿಷ್ಟ ಚೇತನರಿಗೆ ಪ್ರಥಮ ಪ್ರಾಸ್ತಸ್ಯ ನೀಡಬೇಕು. ಯಾವುದೇ ಗೊಂದಲ ಉಂಟಾಗದಂತೆ ನಾಗರೀಕರು ಶಾಂತರೀತಿಯಿಂದ ಸಹಕರಿಸಿ ಜಿಲ್ಲೆಯಲ್ಲಿ ಶೇ.100 ರಷ್ಟು ಮತದಾನ ಆಗುವಂತೆ ಸಹಕರಿಸಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಓ ರವರು ಬಸ್ ನಿಲ್ದಾಣಗಳಲ್ಲಿ ಮತದಾನ ಜಾಗೃತಿ ಕುರಿತ ಪೋಸ್ಟರ್‌ಗಳನ್ನು ಗೋಡೆಗಳ ಮೇಲೆ ಅಂಟಿಸಿದರು. ಇದೇ ವೇಳೆ ಸಾರ್ವಜನಿಕರಿಗೆ, ಯುವ ಮತದಾರರಿಗೆ ಹಾಗೂ ಹಿರಿಯ ನಾಗರಿಕರಿಗೆ ಮತದಾನದ ಜಾಗೃತಿ ಕುರಿತು ಮಾಹಿತಿಯುಳ್ಳ ಕರಪತ್ರಗಳನ್ನು ಹಂಚುವ ಮೂಲಕ ಮತದಾನದ ಮಹತ್ವದ ಕುರಿತು ಅರಿವು ಮೂಡಿಸಿದರು. ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಯಾದ ಸಿ. ಆರ್ ಮುಂಡರಗಿ, ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಾದ ರಾಮಣ್ಣ ಅಥಣಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನಾಧಿಕಾರಿಗಳಾದ ಎ.ಬಿ ಅಲ್ಲಾಪೂರ, ವಿಜಯಪುರ ತಾಲೂಕು ಜಿಲ್ಲಾ ಎನ್.ಎಸ್.ಎಸ್ ಘಟಕದ ನೊಡೆಲ್ ಅಧಿಕಾರಿ ಪ್ರಕಾಶ ರಾಠೋಡ, ಜಿ.ಪಂ.

ಎಎಸ್ಐ ರಾವ್ ಬಹಾದ್ದೂರ್ ಬಾಗವಾನ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿಯಾದಂತಹ ಸಾಕ್ಷಿ ಹಿರೇಮಠ್ ಸೇರಿದಂತೆ ಪ್ರಯಾಣಿಕರು, ರಸ್ತೆ ಸಾರಿಗೆ ನಿಗಮದ ಸಿಬ್ಬಂದಿ ಉಪಸ್ಥಿತರಿದ್ದರು.

# ಕೆಪಿಸಿಸಿ ಅಧ್ಯಕ್ಷರ ರಾಜಕೀಯ ಕಾರ್ಯದರ್ಶಿಯಾಗಿ ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ



ಬೆಂಗಳೂರು: ಹಿರಿಯ ಪತ್ರಕರ್ತ ದೀಪಕ್ ತಿಮ್ಮಯ್ಯ ಅವರನ್ನು ಕೆಪಿಸಿಸಿ ಅಧ್ಯಕ್ಷರು ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಗುರುವಾರ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡರು.

ಸದಾಶಿವನಗರ ನಿವಾಸದಲ್ಲಿ ದೀಪಕ್ ತಿಮ್ಮಯ್ಯ ಪಕ್ಷಕ್ಕೆ ಬರಮಾಡಿಕೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್, "ಹಿರಿಯ ಪತ್ರಕರ್ತರಾದ ದೀಪಕ್ ತಿಮ್ಮಯ ಅವರನ್ನು ಕಾಂಗ್ರೆಸ್ ಪಕ್ಷಕ್ಕೆ ಸಂಬಂಧಿಸಿದಂತೆ ಕೆಪಿಸಿಸಿ ಅಧ್ಯಕ್ಷರ ರಾಜಕೀಯ ಹಾಗೂ ಸಂವಹನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದ್ದು, ಅವರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಕಚೇರಿ ನೀಡಲಾಗುವುದು. ಪಕ್ಷದ ವಿಚಾರವಾಗಿ ಯಾರೇ ನನ್ನನ್ನು ಸಂಪರ್ಕ ಮಾಡಲು ಅವರು ಸಹಕಾರ ನೀಡಲಿದ್ದಾರೆ ಎಂದು ತಿಳಿಸಿದರು.

ಮಾಧ್ಯಮ ಕ್ಷೇತ್ರದಲ್ಲಿ ಸುಮಾರು 30–40 ವರ್ಷಗಳ ಅನುಭವವಿರುವ ದೀಪಕ್ ತಿಮ್ಮಯ, ತಮ್ಮದೇ ಆದ ಸಂಸ್ಥೆ ಮೂಲಕ ಮಕ್ಕಳನ್ನು ನಾಯಕರನ್ನಾಗಿ ರೂಪಿಸುವ ಕೆಲಸ ಮಾಡಿಕೊಂಡು ಬಂದಿದ್ದಾರೆ. ನಾಯಕರನ್ನು ಸೃಷ್ಟಿಸುವವನು ನಾಯಕನೇ ಹೊರತು ಹಿಂಬಾಲಕರನ್ನು ಸೃಷ್ಟಿಸುವವನು ಅಲ್ಲ ಎಂಬಂತೆ ಕೆಲಸ ಮಾಡುತ್ತಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ, ವಿಚಾರವಾಗಿ ಅವರು ನನಗೆ ಅನೇಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಹೀಗಾಗಿ ಅವರಿಗೆ ಕಾಂಗ್ರೆಸ್ ಪಕ್ಷದ ಭಾಗವಾಗುವಂತೆ ಮನವಿ ಮಾಡಿದ್ದೆ. ಅದನ್ನು ಒಪ್ಪಿ ಅವರು ಇಂದು ಪಕ್ಷಕ್ಕೆ ಸೇರ್ಪಡೆ ಆಗಿದ್ದು, ಈ ಜವಾಬ್ದಾರಿ ತೆಗೆದುಕೊಳ್ಳುತ್ತಿದ್ದಾರೆ ಎಂದು ಉಪ ಮುಖ್ಯಮಂತ್ರಿ ಮಾಹಿತಿ ನೀಡಿದರು.

# ಬಿಸಿಲ ಶಾಖದಿಂದ ತಪ್ಪಿಸಿಕೊಳ್ಳಲು ಮಾರ್ಗಸೂಚಿ

2024 ಚಳಿಗಾಲದ ನಂತರ ಬಿಸಿಗಾಳಿಯು ಈಗ ಸುಡುವ ಶಾಖದೊಂದಿಗೆ ಪ್ರಾರಂಭವಾಗಿದೆ. ದೇಹದಲ್ಲಿ ನೀರಿನ ಕೊರತೆಯಿಂದಾಗಿ ಹೆಚ್ಚಿನ ಜನರು ಅನೇಕ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಈ ವಿಪರೀತ ಶಾಖ ಮತ್ತು ಶಾಖದ ಅಲೆಯಿಂದ ನಿಮ್ಮನ್ನು ನೀವು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದಕ್ಕೆ ಆರೋಗ್ಯ ಸಚಿವಾಲಯ ಮಾರ್ಗಸೂಚಿ ಪ್ರಕಟಿಸಿದೆ.

ಬೇಸಿಗೆ ಬಂತೆಂದರೆ ಹೊರಗೆ ಬಿಸಿಲಿನ ಬೇಗೆ ದಿನದಿಂದ ದಿನಕ್ಕೆ ಅಸಹನೀಯವಾಗುತ್ತಿದೆ. ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಏಪ್ರಿಲ್ ಮತ್ತು ಜೂನ್ ನಡುವೆ ಹಲವಾರು ರಾಜ್ಯಗಳಲ್ಲಿ ರಣ ಬಿಸಿಲಿನ ಎಚ್ಚರಿಕೆ ನೀಡಿದೆ. ಇದರರ್ಥ ಬೇಸಿಗೆ ಸ್ನೇಹಿಯಾಗಿ ಮಾಡಲು ನಿಮ್ಮ ಆಹಾರ ಮತ್ತು ಒಟ್ಟಾರೆ ಜೀವನಶೈಲಿಯನ್ನು ಪುನರ್ನಿರ್ಮಿಸುವ ಸಮಯ. ಈ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೆಲವು ಆಹಾರ–ಸಂಬಂಧಿತ ಮುನ್ನೆಚ್ಚರಿಕೆಗಳ ಕುರಿತಂತೆ ಮಾಹಿತಿ ಹಂಚಿಕೊಂಡಿದೆ.

ಆರೋಗ್ಯ ಸಚಿವಾಲಯವು ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಫಿನಲ್ಲಿ ಪೋಸ್ಟ್ ಮಾಡಿದೆ. "ಹೈಡ್ರೇಟೆಡ್ ಆಗಿರಿ, ಲಘು ಆಹಾರ ಸೇವಿಸಿ ಮತ್ತು ನಿಮ್ಮ ಊಟವನ್ನು ಆನಂದಿಸುತ್ತಿರುವಾಗ ಬೇಸಿಗೆಯ ಶಾಖವನ್ನು ಸೋಲಿಸಲು ಸ್ಮಾರ್ಟ್ ಆಯ್ಕೆಗಳನ್ನು ಮಾಡಿ ಎಂದು ವಿಡಿಯೋವನ್ನು ಹಂಚಿಕೊಂಡಿದೆ.

ಬೇಸಿಗೆಯಲ್ಲಿ 4 ಆಹಾರ–ಸಂಬಂಧಿತ ಮುನ್ನೆಚ್ಚರಿಕೆ ಕ್ರಮಗಳು ಇಲ್ಲಿವೆ:

1. ಮಧ್ಯಾಹ್ನ ಅಡುಗೆ ಮಾಡುವುದನ್ನು ತಪ್ಪಿಸಿ:

ಮಧ್ಯಾಹ್ನದ ಶಾಖ ಮತ್ತು ಸುಡುವ ಅನಿಲವು ಅಡುಗೆಮನೆಯ ತಾಪಮಾನವನ್ನು ಹೆಚ್ಚಿಸುತ್ತದೆ. ಇದು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ. ಆದ್ದರಿಂದ, ದೇಹದ ಉಷ್ಣತೆ ಮತ್ತು ಸಂಬಂಧಿತ ಆರೋಗ್ಯ ಸಮಸ್ಯೆಗಳನ್ನು ಹೆಚ್ಚಿಸುವ ಅಪಾಯಗಳನ್ನು ತಡೆಯಲು ದಿನದ ಪೀಕ್ ಅವರ್‌ಗಳಲ್ಲಿ, ವಿಶೇಷವಾಗಿ ಮಧ್ಯಾಹ್ನದ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಲು ಸರ್ಕಾರ ಸಲಹೆ ನೀಡುತ್ತದೆ.

2. ಅಡುಗೆ ಮನೆಯನ್ನು ತಂಪಾಗಿಡಿ:

ಅಡುಗೆ ಮಾಡುವಾಗ ಹೊಗೆ, ಉಗಿ ಮತ್ತು ವಾಸನೆಯನ್ನು ಉತ್ಪಾದಿಸುತ್ತದೆ. ಅದು ನಮ್ಮ ಚರ್ಮ ಮತ್ತು ಕಣ್ಣುಗಳನ್ನು ಮತ್ತಷ್ಟು ಕೆರಳಿಸುತ್ತದೆ. ಈ ಅಂಶಗಳು ಹೆಚ್ಚಾಗಿ ಉಸಿರಾಟದ ತೊಂದರೆಗಳನ್ನು ಉಂಟುಮಾಡುತ್ತವೆ. ಆದ್ದರಿಂದ, ಅಡುಗೆ ಮನೆಯ ತಂಪಾಗಿಡಲು ಕಿಟಕಿಗಳು ಮತ್ತು ಬಾಗಿಲುಗಳನ್ನು ತೆರೆಯಲು ಸರ್ಕಾರ ಸಲಹೆ ನೀಡುತ್ತದೆ.

3. ಹೆಚ್ಚಿನ ಪ್ರೋಟೀನ್ ಆಹಾರವನ್ನು ತಪ್ಪಿಸಿ:

ಬೇಸಿಗೆಯಲ್ಲಿ ಅತಿಯಾದ ಶಾಖದಿಂದಾಗಿ ದೇಹವು ಬಹಳಷ್ಟು ನೀರನ್ನು ಕಳೆದುಕೊಳ್ಳುತ್ತದೆ. ಪ್ರೋಟೀನ್ ಅನ್ನು ಜೀರ್ಣಿಸಿಕೊಳ್ಳಲು ನಮ್ಮ ದೇಹಕ್ಕೆ ಹೆಚ್ಚುವರಿ ನೀರು ಬೇಕಾಗುತ್ತದೆ. ನೀರಿನ ಕೊರತೆಯು ಸಾಮಾನ್ಯವಾಗಿ ನಿರ್ಜಲೀಕರಣ ಮತ್ತು ಸಂಬಂಧಿತ ಆರೋಗ್ಯ ತೊಂದರೆಗಳಿಗೆ ಕಾರಣವಾಗುತ್ತದೆ. ಆದ್ದರಿಂದ, ನಿಮ್ಮ ಕರುಳನ್ನು ತಂಪಾಗಿ ಮತ್ತು ಆರೋಗ್ಯಕರವಾಗಿಡಲು ಹೆಚ್ಚಿನ ಪ್ರೋಟೀನ್ ಆಹಾರವನ್ನು ತ್ಯಜಿಸಲು ಸಲಹೆ ನೀಡಿದೆ.

4. ಕೆಫೀನ್ ಮತ್ತು ಕಾರ್ಬೋನೇಟೆಡ್ ಪಾನೀಯಗಳನ್ನು ತಪ್ಪಿಸಿ:

ಚಹಾ ಮತ್ತು ಕಾಫಿ, ಕಾರ್ಬೋನೇಟೆಡ್ ಪಾನೀಯಗಳು ಮತ್ತು ಸಕ್ಕರೆ ಪಾನೀಯಗಳಂತಹ ಕೆಫೀನ್‌ಗಳು ಪ್ರಕೃತಿಯಲ್ಲಿ ಮೂತ್ರವರ್ಧಕಗಳಾಗಿವೆ. ಇದು ನಿರ್ಜಲೀಕರಣದ ಅಪಾಯವನ್ನು ಹೆಚ್ಚಿಸುತ್ತದೆ. ಆದ್ದರಿಂದ, ದೇಹದಿಂದ ಹೆಚ್ಚುವರಿ ದ್ರವದ ನಷ್ಟವನ್ನು ತಪ್ಪಿಸಲು ಈ ಪಾನೀಯಗಳ ಸೇವನೆಯನ್ನು ಮಿತಿಗೊಳಿಸಲು ತಜ್ಞರು ಸಲಹೆ ನೀಡುತ್ತಾರೆ.

# ರಸ್ತೆಯುದ್ದಕ್ಕೂ ಉಗುಳುತ್ತಾ ಹೋಗುತ್ತಿದ್ದ ಇಬ್ಬರ ಬಂಧನ

ಕಲಬುರಗಿ: ರಾಮಮಂದಿರ ಸರ್ಕಲ್ ಬಳಿಯ ಧನ್ವಂತರಿ ಆಸ್ಪತ್ರೆಯ ಹತ್ತಿರ ಉಗುಳುತ್ತಿದ್ದ ವ್ಯಕ್ತಿಯನ್ನು ಬಂಧಿಸಿ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಮೈಸೂರು: ಜೆಎಸ್‌ಎಸ್ ಬಡಾವಣೆಯಲ್ಲಿ ನೆಲದ ಮೇಲೆ ಪದೇ ಪದೇ ಉಗಿಯುತ್ತಿದ್ದ ಸೈಯದ್ ಎಂಬುವವರನ್ನು ಬಂಧಿಸಲಾಗಿದೆ. ಇವರು ಅಧಿಕೃತವಾಗಿ ಪಾಸ್ ಪಡೆದು ಮಂಗಳಮುಖಿಯರಿಗೆ ಸಹಾಯ ಮಾಡಲೆಂದೇ ಅಕ್ಕಿಯನ್ನು ಸ್ಕೂಟರ್‌ನಲ್ಲಿ ಹಾಕಿಕೊಂಡು ಬಂದಿದ್ದರು.

ಮೈಸೂರು ಹಾಗೂ ಕಲಬುರಗಿಯಲ್ಲಿ ಓರ್ವನನ್ನು ಬಂಧಿಸಲಾಗಿದೆ. ಕೊರೊನಾ ವೈರಸ್ ಭೀತಿ ಆರಂಭವಾದಾಗಿನಿಂದ ಸೀನುವುದು, ಕೆಮ್ಮುವುದು ಇದರ ಮೇಲೆ ಜನರೆಲ್ಲರ ಗಮನವಿರುತ್ತದೆ.

ಹೋಗಿರುವಾಗ ರಸ್ತೆಯಲ್ಲಿ ಉಗುಳುತ್ತಾ ಹೋದವನ ಮೇಲೆ ಸಾರ್ವಜನಿಕರಿಗೆ ಅನುಮಾನ ಬಂದು ಪೊಲೀಸರಿಗೆ ಕರೆ ಮಾಡಿ ವಿಷಯ ತಿಳಿಸಿದ್ದಾರೆ ತಕ್ಷಣವೇ ಬಂದು ಆತನನ್ನು ಬಂಧಿಸಿದ್ದಾರೆ. ಆದರೆ ವಿಚಾರಣೆ ವೇಳೆ ಹೇಳಿಕೆಯನ್ನು ಪದೇ ಪದೇ ಬದಲಾಯಿಸಿದ್ದಾನೆ. ಹೀಗಾಗಿ ಆತನ ಮೇಲಿದ್ದ ಅನುಮಾನ ಇನ್ನಷ್ಟು ಹೆಚ್ಚಾಗಿದೆ.

# ಗ್ಯಾರಂಟಿ ಕಾರ್ಡ್‌ಗಳ ವಿತರಣೆ: ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು

ಬೆಂಗಳೂರು: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರ ಸಹಿ ಇರುವ ಕಾಂಗ್ರೆಸ್‌ನ 'ಗ್ಯಾರೆಂಟಿ ಕಾರ್ಡ್'ಗಳನ್ನು ಮತದಾರರಿಗೆ ಹಂಚುವುದನ್ನು ತಡೆಯುವಂತೆ ಭಾರತ ಚುನಾವಣಾ ಆಯೋಗಕ್ಕೆ (ಇಸಿಐ) ಬಿಜೆಪಿ ದೂರು ಸಲ್ಲಿಸಿದೆ. ರಾಹುಲ್ ಗಾಂಧಿ ಮತ್ತು ಖರ್ಗೆ ಅವರ ಭಾವಚಿತ್ರ ಮತ್ತು ಸಹಿ ಇರುವ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಲು ಕಾಂಗ್ರೆಸ್ ಸಿದ್ಧವಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಗ್ಯಾರಂಟಿ ಕಾರ್ಡ್‌ಗಳಲ್ಲಿ QR ಕೋಡ್ ಸಹ ಒಳಗೊಂಡಿದೆ.

ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಮತದಾರರಿಂದ ಅನಗತ್ಯ ಲಾಭ ಪಡೆಯಲು ಈ ರೀತಿ ಮಾಡಲಾಗುತ್ತಿದೆ. ಈ ಕಾರ್ಡ್‌ಗಳನ್ನು ದೇಶದಾದ್ಯಂತ ವಿತರಿಸಲು ಸಿದ್ಧತೆಗಳು ನಡೆಯುತ್ತಿವೆ. ಗ್ಯಾರಂಟಿ ಕಾರ್ಡ್‌ಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಲಾಗಿದೆ. ಈ ಕ್ರಮವು ಮಾದರಿ ನೀತಿ ಸಂಹಿತೆಯ ಸ್ಪಷ್ಟ ಉಲ್ಲಂಘನೆಯಾಗಿದೆ. ಕಾಂಗ್ರೆಸ್ ಗ್ಯಾರಂಟಿಗಳಿಗೆ ಸಂಬಂಧಿಸಿದ ವಿಷಯದ ಜೊತೆಗೆ, ಮತದಾರರ ವೈಯಕ್ತಿಕ ವಿವರಗಳನ್ನು ಸಂಗ್ರಹಿಸಲು ಒಂದು ಸ್ವರೂಪವನ್ನು ಸಹ ಸಿದ್ಧಪಡಿಸಲಾಗಿದೆ. ಮತದಾರರ ವೈಯಕ್ತಿಕ ವಿವರಗಳನ್ನು ಸಂಗ್ರಹಿಸುವುದು ಅಪರಾಧ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ರಾಜ್ಯದ ಮತದಾರರಿಗೆ 'ಕಾಂಗ್ರೆಸ್ ಗ್ಯಾರಂಟಿ ಕಾರ್ಡ್' ವಿತರಣೆಯನ್ನು ನಿಲ್ಲಿಸುವ ಕುರಿತು ನಿರ್ದೇಶನ ನೀಡುವಂತೆ ಬಿಜೆಪಿ ಆಗ್ರಹಿಸಿದೆ. ಈ ಸಂಬಂಧ ಮಾಜಿ ಉಪಮುಖ್ಯಮಂತ್ರಿ ಹಾಗೂ ಬಿಜೆಪಿ ಶಾಸಕ ಸಿ.ಎನ್. ಅಶ್ವಥ್ ನಾರಾಯಣ್, ವಿವೇಕ್ ಎಸ್.ರೆಡ್ಡಿ, ಪ್ರಮುಖ್, ಕಾನೂನು ಮತ್ತು ಚುನಾವಣಾ ಸಮಿತಿ ಹಾಗೂ ಕಾನೂನು ಕೋಶದ ಸಂಚಾಲಕ ವಸಂತಕುಮಾರ್ ಅವರು ಆಯೋಗಕ್ಕೆ ದೂರು ಸಲ್ಲಿಸಿದರು.

ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ಫೋಟೋವನ್ನು ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಿದ ಬಿಜೆಪಿ, ಕಾಂಗ್ರೆಸ್ ಪಕ್ಷದ ತನ್ನ ಪ್ರಣಾಳಿಕೆಯಲ್ಲಿ ಮಾಡಿದ ಭರವಸೆಗಳನ್ನು ಎತ್ತಿ ತೋರಿಸಿದೆ.

ಗ್ಯಾರಂಟಿ ಕಾರ್ಡ್ ನಲ್ಲಿ ಮಹಿಳಾ ನ್ಯಾಯ ಅಡಿಯಲ್ಲಿ ಮಹಿಳೆಯರಿಗೆ ಪ್ರತಿ ವರ್ಷ ರೂ 1 ಲಕ್ಷ ಭತ್ಯೆ, ಯುವ ನ್ಯಾಯದಡಿ ಪ್ರತಿ ವಿದ್ಯಾವಂತ ಯುವಕರಿಗೆ ಉದ್ಯೋಗ ಮತ್ತು ಶಿಷ್ಯವೃತ್ತಿಯ ಸಮಯದಲ್ಲಿ ವಾರ್ಷಿಕ ರೂ 1 ಲಕ್ಷ ವೇತನ, ಕಿಸಾನ್ ನ್ಯಾಯ ಅಡಿಯಲ್ಲಿ ರೈತರ ಸಾಲ ಮನ್ನಾ ಮತ್ತು ಜಾತಿ ಗಣತಿ ಮತ್ತು ಶ್ರಮಿಕ ನ್ಯಾಯ ಅಡಿಯಲ್ಲಿ ದಿನಕ್ಕೆ ಕನಿಷ್ಠ 400 ರೂ. ಸೇರಿದಂತೆ ಮತದಾರರು ಮತ್ತು ಕಾಂಗ್ರೆಸ್ ಕಾರ್ಯಕರ್ತರ ಫೋನ್ ಸಂಖ್ಯೆ ಸೇರಿದಂತೆ ಎಲ್ಲಾ ವಿವರಗಳನ್ನು ಕೇಳಲಾಗಿದೆ.

# ಶಿವರಾಂ ಹೆಬ್ಬಾರ್ ಪುತ್ರ ವಿವೇಕ್ ಹೆಬ್ಬಾರ್ ಕಾಂಗ್ರೆಸ್ ಸೇರ್ಪಡೆ



ಕಾರವಾರ: ಬಿಜೆಪಿಯಲ್ಲಿದ್ದರೂ ಅಂತರ ಕಾಯ್ದುಕೊಂಡು ಬಂದಿರುವ ಯಲ್ಲಾಪುರ ಶಾಸಕ ಶಿವರಾಂ ಹೆಬ್ಬಾರ್ ಅವರ ಪುತ್ರ ವಿವೇಕ್ ಹೆಬ್ಬಾರ್ ಅವರು ಗುರುವಾರ ತಮ್ಮ ಬೆಂಬಲಿಗರೊಂದಿಗೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಬಿಜೆಪಿ ತೊರೆದ ವಿವೇಕ್ ಹೆಬ್ಬಾರ್ ಅವರು ಇಂದು ರಾಜ್ಯ ಕಾಂಗ್ರೆಸ್ ಉಪಾಧ್ಯಕ್ಷ ಮತ್ತು ಮಾಜಿ ಎಂಎಲ್ ಸಿ ಐವನ್ ಡಿಸೋಜಾ ಮತ್ತು ಇತರ ಸ್ಥಳೀಯ ಕಾಂಗ್ರೆಸ್ ಮುಖಂಡರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರಿದರು. ಕಾಂಗ್ರೆಸ್ ಸೇರಿದ ಬಳಿಕ ಮಾತನಾಡಿದ ವಿವೇಕ ಹೆಬ್ಬಾರ್,? ನನ್ನ ತಂದೆಯವರು ಕಾಂಗ್ರೆಸ್ ಸೇರ್ಪಡೆ ಆಗುವುದರ ಬಗ್ಗೆ ನನಗೆ ಗೊತ್ತಿಲ್ಲ. ನಮ್ಮ ಕಾರ್ಯರ್ತರಿಗೆ ಪಕ್ಷದಲ್ಲಿ ಆದ ತಾರತಮ್ಯ ಮನಗಂಡು ಈ ನಿರ್ಧಾರಕ್ಕೆ ಬಂದಿದ್ದೇನೆ. ನಮ್ಮ ಕಾರ್ಯರ್ತರಿಗೆ ಪಕ್ಷದಲ್ಲಿ ಸ್ಥಾನ ಮಾನ ಕೊಡಿಸುವ ವಿಚಾರದಲ್ಲಿ ಅಸಮಾಧಾನ ಇತ್ತು. ವಿಧಾನ ಸಭೆ ಚುನಾವಣೆಯಲ್ಲಿ ಕೆಲ ಬಿಜೆಪಿಯವರೆ ನಮ್ಮ ತಂದೆಯವರನ್ನ ಸೋಲಿಸಲು ಪ್ರಯತ್ನಿಸಿದರು. ಆದ್ರು ಅವರು ಗೆಲುವು ಸಾಧಿಸಿದರು ಎಂದರು.

ಫೆಬ್ರವರಿ 27 ರಂದು ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ವಿಪ್ ನೀಡಿದ್ದರೂ ಮತದಾನಕ್ಕೆ ಗೈರು ಆಗುವ ಮೂಲಕ ಕೇಸರಿ ಪಕ್ಷಕ್ಕೆ ಮುಜುಗರ ಉಂಟು ಮಾಡಿದ್ದ ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ್ ಕೂಡ ಕಾಂಗ್ರೆಸ್ ಸೇರಲು ಯೋಜಿಸುತ್ತಿದ್ದಾರೆ ಎಂಬ ಊಹಾಪೋಹಗಳ ನಡುವೆ ಅವರ ಪುತ್ರ ಅಧಿಕೃತವಾಗಿ ಕಾಂಗ್ರೆಸ್ ಸೇರಿದ್ದಾರೆ.

ಪಕ್ಷದ ವಿಪ್ ಉಲ್ಲಂಘಿಸಿದ್ದಕ್ಕೆ ಬಿಜೆಪಿ ಹೆಬ್ಬಾರ್ ಅವರಿಗೆ ನೋಟಿಸ್ ಜಾರಿ ಮಾಡಿದ್ದು, ಅದಕ್ಕೆ ಅವರು ಉತ್ತರ ಸಹ ನೀಡಿದ್ದಾರೆ.

ಈಗ ಲೋಕಸಭಾ ಚುನಾವಣೆ ಪ್ರಚಾರದ ಭರಾಟೆ ಜೋರಾಗಿದ್ದರೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಶಿವರಾಂ ಹೆಬ್ಬಾರ್ ಅವರು ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ನಡೆಸುತ್ತಿಲ್ಲ.